**3 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂ.,ರವರ ನ್ಯಾಯಾಲಯ, ಕಡೂರು.**

**ಸಿ.ಸಿ.ನಂ. 4111/2023**

**ದಿನಾಂಕಃ 15-05-2025 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

| | | |
|---|---|---|
| ಸಾಕ್ಷಿಯ ಹೆಸರು ಃ | ಸಜಿತ್ ಕುಮಾರ್ ಜಿ ಆರ್ | ಚಾಸಾ-9, ಪ್ರಾಸ-4 |
| ಗಂಡನ ಹೆಸರು ಃ | ರಾಜು ಟಿ | |
| ವಯಸ್ಸು ಃ | 36 ವರ್ಷ | |
| ಉದ್ಯೋಗ ಃ | ಉಪ ನಿರೀಕ್ಷಕರು | |
| ವಾಸ ಃ | ಬೀರೂರು | |

**ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ**

ನಾನು ದಿಃ 06.07.2023 ರಿಂದ ಇಲ್ಲಿಯವರೆಗೆ ಬೀರೂರು ಠಾಣೆಯಲ್ಲಿ ಆರಕ್ಷಕ ಉಪ ನೀರಿಕ್ಷಕನಾಗಿ ಕರ್ತವ್ಯ ನಿರ್ವಹಿಸುತ್ತಿದ್ದೇನೆ.

ದಿಃ 06.08.2023 ರಂದು ಪ್ರಕರಣದ ಕಡತವನ್ನು ಚಾಸಾ-8 ರವರಿಂದ ಮುಂದಿನ ತನಿಖೆಗಾಗಿ ಪಡೆದಿರುತ್ತೇನೆ. ದಿಃ 06.08.2023 ರಂದು ಸಾಕ್ಷಿದಾರರಾದ ಚಾಸಾ-2 ರಿಂದ 5 ರವರ ಹೇಳಿಕೆಯನ್ನು ದಾಖಲಿಸಿರುತ್ತೇನೆ. ದಿಃ 02.09.2023 ರಂದು ವಶಪಡಿಸಿಕೊಂಡ ಮದ್ಯವನ್ನು ರಾಸಾಯನಿಕ ಪರೀಕ್ಷೆಗಾಗಿ ಚಾಸಾ-7 ರವರಿಗೆ ಕೋರಿಕೆ ಪತ್ರದೊಂದಿಗೆ ನೀಡಿರುತ್ತೇನೆ. ಚಾಸಾ-6 ರವರಿಗೆ ಘಟನಾ ಸ್ಥಳದಲ್ಲಿ ವಿದ್ಯುತ್ ಕಂಬ ಇರುವ ಬಗ್ಗೆ ಹಾಗೂ ಸದರಿ ವಿದ್ಯುತ್ ಕಂಬದಲ್ಲಿ ವಿದ್ಯುತ್ ಇದ್ದ ಬಗ್ಗೆ ಮಾಹಿತಿ ನೀಡುವಂತೆ ಕೋರಿಕೆ ಪತ್ರ ನೀಡಿರುತ್ತೇನೆ. ನಂತರ ದಿಃ 27.09.2023 ರಂದು ಚಾಸಾ-6 ರವರಿಂದ ವರದಿ ಸ್ವೀಕರಿಸಿರುತ್ತೇನೆ. ದಿಃ 27.09.2023 ರಂದು ಚಾಸಾ-7 ರವರಿಂದ ರಾಸಾಯನಿಕ ವಿಶ್ಲೇಷಣಾ ವರದಿಯನ್ನು ಸ್ವೀರಿಕಸಿ ಕಡತಕ್ಕೆ ಅಳವಡಿಸಿಕೊಂಡು ಆರೋಪಿ ವಿರುದ್ಧ ಆರೋಪ ಸಾಬೀತಾದ್ದರಿಂದ ಅದೇ ದಿನ ನ್ಯಾಯಾಲಯಕ್ಕೆ ಅಂತಿಮ ವರದಿ ಸಲ್ಲಿಸಿರುತ್ತೇನೆ. ಸಾಕ್ಷಿಯು ಚಾಸಾ-6 ರವರಿಗೆ ನೀಡಿರುವ ಕೋರಿಕೆ ಪತ್ರವನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-6 ಎಂದು, ಸಾಕ್ಷಿ ಸಹಿಯನ್ನು ನಿಪಿ-6(ಎ) ಎಂದು ಗುರುತಿಸಲಾಯಿತು. ಚಾಸಾ-6 ರವರು ನೀಡಿರುವ ವರದಿ ಮತ್ತು ದಾಖಲೆಗಳನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-7 ಎಂದು, ಸಾಕ್ಷಿ ಸಹಿಯನ್ನು ನಿಪಿ-7(ಎ) ಎಂದು ಗುರುತಿಸಲಾಯಿತು. ಚಾಸಾ-8 ರವರಿಗೆ ನೀಡಿರುವ ಕೋರಿಕೆ ಪತ್ರವನ್ನು ನಿಪಿ-8 ಎಂದು ಗುರುತಿಸಲಾಯಿತು. ಚಾಸಾ-7 ರವರು ನೀಡಿರುವ ರಾಸಾಯನಿಕ ವಿಶ್ಲೇಷಣಾ ವರದಿಯನ್ನು ನಿಪಿ-9 ಎಂದು, ಸಾಕ್ಷಿ ಸಹಿಯನ್ನು ನಿಪಿ-9(ಎ) ಎಂದು ಗುರುತಿಸಲಾಯಿತು.

**ಪಾಟೀಸವಾಲುಃ ಆರೋಪಿ ಪರ ಶ್ರೀ. ಎಸ್ ಎನ್ ಎ ವಕೀಲರಿಂದಃ**

ನಾನು ಯಾವುದೇ ಸಾಕ್ಷಿದಾರರ ಹೇಳಿಕೆಯನ್ನು ದಾಖಲಿಸಿರುವುದಿಲ್ಲ ಎಂದರೆ ಸರಿಯಲ್ಲ ಹಾಗೂ ಚಾಸಾ-6 ರವರಿಂದ ಯಾವುದೇ ವರದಿಯನ್ನು ಸ್ವೀಕರಿಸಿರುವುದಿಲ್ಲ ಎಂದರೆ ಸರಿಯಲ್ಲ. ಆರೋಪಿಗೂ

ಮುಮಾ ಗೂ ಯಾವುದೇ ಸಂಬಂಧ ಇಲ್ಲದಿದ್ದರೂ ಸಹ ಆರೋಪಿ ವಿರುದ್ದ ಸುಳ್ಳು ದೋಷಾರೋಪಣಾ ಪತ್ರ ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ. ಎಲ್ಲಾ ವಿಚಾರ ಗೊತ್ತಿದ್ದರೂ ಸಹ ಇಲಾಖಾ ಅಂಕಿ ಅಂಶಕ್ಕಾಗಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಮರು ವಿಚಾರಣೆ : ಇಲ್ಲ</u>

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)**

ಓ ಹೇ ಕೇ ಸ ಇ

Sd/-
3 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರಃದಃನ್ಯಾಃದಂ.,ರವರು, ಕಡೂರು.